# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1415 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |
| ಉತ್ತರಿಸುವ ದಿನಾಂಕ | : | 30-12-2022 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇಲ್ಲಿಯವರೆಗೆ ರೈತರು ಕೃಷಿಯಲ್ಲಿ ಮಾಡಿರುವ ಸಾಧನೆಯನ್ನು ಗುರುತಿಸಿ, ರಾಜ್ಯ ಪ್ರಶಸ್ತಿ ಹಾಗೂ ಸೂಪರ್ ಸ್ಟಾರ್ ಆದ ಎಷ್ಟು ಜನ ರೈತರಿಗೆ ಗೌರವ ಡಾಕ್ಟರೇಟ್ ನೀಡಲಾಗಿದೆ; (ಮಾಹಿತಿ ಒದಗಿಸುವುದು) | ಬೆಂಗಳೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಶ್ರೀ ಎನ್. ಸಿ. ಪಟೇಲ್ ರವರಿಗೆ 2022ರ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಗಿದೆ. |
| ಆ) | ಗೌರವ ಡಾಕ್ಟರೇಟ್ ನೀಡದಿದ್ದ ಪಕ್ಷದಲ್ಲಿ, ರಾಜ್ಯದಲ್ಲಿನ ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ಡಾಕ್ಟರೇಟ್ ನೀಡುವಂತೆ ಕೃಷಿಕ ರೈತರನ್ನು ಗುರುತಿಸಿ ಡಾಕ್ಟರೇಟ್ ನೀಡುವ ಬಗ್ಗೆ ಸರ್ಕಾರ ಚಿಂತಿಸುವುದೇ; | ಬೆಂಗಳೂರು ಮತ್ತು ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ಕೃಷಿ ಕ್ಷೇತ್ರದ ಸಾಧಕರಿಗೆ 2022 ರಿಂದ ನಿಯಮಾನುಸಾರ ಗೌರವ ಡಾಕ್ಟರೇಟ್ ನೀಡಲಾಗುತ್ತಿದೆ.<br><br>ರಾಜ್ಯದಲ್ಲಿನ ಕೃಷಿಕ ರೈತರನ್ನು ಗುರುತಿಸಿ ಹಾಗೂ ಅವರು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಪರಿಗಣಿಸಿ, ಅಂತಹ ಸಾಧಕರಿಗೆ ಗೌರವ ಡಾಕ್ಟರೇಟ್ ನೀಡುವ ಬಗ್ಗೆ ಅಗತ್ಯ ಸೂಚನೆಗಳನ್ನು ಮಾನ್ಯ ರಾಜ್ಯಪಾಲರ ಸಚಿವಾಲಯದ ದಿನಾಂಕ: 18-02-2016ರ ಸುತ್ತೋಲೆಯನ್ವಯ ಕ್ರಮ ಕೈಗೊಳ್ಳಲು ರಾಜ್ಯದಲ್ಲಿರುವ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳಿಗೆ ನೀಡಲಾಗಿದೆ. ಈಗಾಗಲೇ ಗೌರವ ಡಾಕ್ಟರೇಟ್ ಅನ್ನು ನೀಡಲು ಅಗತ್ಯ ಬದಲಾವಣೆಗಳನ್ನು ನಿಯಮಗಳಲ್ಲಿ ತರಲಾಗಿದೆ.<br><br>ಕೃಷಿಕರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಬೆಂಗಳೂರು ಮತ್ತು ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಮಟ್ಟದಲ್ಲಿ ಕೃಷಿ ಸಾಧಕರಿಗೆ ಮಾರ್ಗಸೂಚಿಗಳನ್ವಯ ಗೌರವ ಡಾಕ್ಟರೇಟ್ ನೀಡಲಾಗುತ್ತಿದೆ.<br><br>ಮುಂದಿನ ದಿನಗಳಲ್ಲಿ ಸೂಕ್ತ ಮಾರ್ಗಸೂಚಿ/ ನಿಯಮಾವಳಿಗಳನ್ನು ಉಳಿದ ವಿಶ್ವವಿದ್ಯಾಲಯಗಳಲ್ಲಿ ಅಳವಡಿಸಿಕೊಂಡು ಗೌರವ ಡಾಕ್ಟರೇಟ್ ನೀಡಲು ಕ್ರಮಕೈಗೊಳ್ಳಲಾಗುವುದು. |
| ಇ) | ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ನಿರ್ಧಾರಗಳೇನು; (ಮಾಹಿತಿ ನೀಡುವುದು) | |
| ಈ) | ಕೃಷಿಕ ರೈತರನ್ನು ಪ್ರೋತ್ಸಾಹಿಸುವ ಸಲುವಾಗಿ ಕೃಷಿಯಲ್ಲಿ ವೈಜ್ಞಾನಿಕ ಚಿಂತನೆಗಳನ್ನು ಅಳವಡಿಸಿಕೊಂಡು ಕೃಷಿಯಲ್ಲಿ ಹೆಚ್ಚು ಹೆಚ್ಚಾಗಿ ರೈತರನ್ನು ಅವಲಂಬಿಗಳನ್ನಾಗಿ ಮಾಡಲು ಈ ಗೌರವ ಡಾಕ್ಟರೇಟ್ ನೀಡುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು? | |

ಇ-ಸಂಖ್ಯೆ: AGRI-AUM/78/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು